## ಕರ್ನಾಟಕ ಸರ್ಕಾರದ ನಡವಳಗಳು

**ವಿಷಯ:** ಶ್ರೀ ಟಿ. ಸಿದ್ದಪ್ಪ, ಹಿಂದಿನ ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯತಿ, ಸಾಗರ, ಶಿವಮೊಗ್ಗ ಜಿಲ್ಲೆ ಇವರ ವಿರುದ್ಧ ಇಲಾಖಾ ವಿಚಾರಣೆ ನಡೆಸಲು ವಿಚಾರಣಾಧಿಕಾರಿ ಮತ್ತು ಮಂಡನಾಧಿಕಾರಿಯನ್ನು ನೇಮಕ ಮಾಡುವ ಬಗ್ಗೆ.

**ಓದಲಾಗಿದೆ:** 1. ಸರ್ಕಾರದ ಕಾರಣ ಕೇಳುವ ಸಂಖ್ಯೆ: ಗ್ರಾಅಪ 128 ವಿಸೇಬಿ 2014, ದಿನಾಂಕ: 16-10-2014

------

**ಪ್ರಸ್ತಾವನೆ:**

ಟಿ. ಸಿದ್ದಪ್ಪ, ಹಿಂದಿನ ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯತಿ, ಸಾಗರ, ಶಿವಮೊಗ್ಗ ಜಿಲ್ಲೆ ಇವರು ಸದರಿ ಹುದ್ದೆಯಲ್ಲಿ ಕರ್ತವ್ಯ ನಿರ್ವಹಿಸುತ್ತಿದ್ದ ಅವಧಿಯಲ್ಲಿ ಸಾಗರ ತಾಲ್ಲೂಕು ತುಮರಿ ಗ್ರಾಮ ಪಂಚಾಯತಿಯ ಕಾರ್ಯದರ್ಶಿಯವರು ಗ್ರಾಮ ಪಂಚಾಯತಿ ವಲಯದ ಅಭಿವೃದ್ಧಿ ಅನುದಾನದಡಿ 2004-05 ಮತ್ತು 2006-07 ನೇ ಸಾಲಿಗೆ ಸಂಬಂಧಿಸಿದ 16 ಕಾಮಗಾರಿಗಳಿಗೆ ಕ್ರಿಯಾ ಯೋಜನೆಯನ್ನು ತಯಾರಿಸಿ, ಸಲ್ಲಿಸಿದ್ದು, ನಿಯಮ ಬಾಹಿರವಾಗಿ ತಮ್ಮ ಅಧಿಕಾರ ವ್ಯಾಪ್ತಿ ಮೀರಿ 2013-14 ನೇ ಸಾಲಿನ ಅನುದಾನ ವನ್ನು ಬಳಕೆ ಮಾಡಲು ಅನುಮೋದನೆ ನೀಡಿರುವುದು ಹಾಗೂ ವೆಚ್ಚವನ್ನು 2013-14 ನೇ ಸಾಲಿನ ಪ್ರಥಮ ಕಂತಿನ ಅನುದಾನದಲ್ಲಿ ಅನುಮೋದನೆ ನೀಡಿ ಸರ್ಕಾರವು /ಜಿಲ್ಲಾ ಪಂಚಾಯತಿ ಯಿಂದ 2013-14 ಯಿಂದ 2013-14ನೇ ಸಾಲಿನ ಕಾಮಗಾರಿಗಳನ್ನು ಅನುಷ್ಠಾನಗೊಳಿಸಲು ಪ್ರಥಮ ಕಂತಿನ ಅನುದಾನ ಬಿಡುಗಡೆಗೊಳಿಸಿದ್ದನ್ನು 8-10 ವರ್ಷಗಳ ಹಿಂದಿನ ಅಂದರೆ 2004-05 ಮತ್ತು 2006-07ನೇ ಸಾಲಿನ 16 ಕಾಮಗಾರಿಗಳ ವೆಚ್ಚವನ್ನು ಭರಿಸಲು ಅನುಮೋದನೆ ನೀಡಿರುವುದು, ಎಂಜಿಎನ್‌ಆರ್‌ಇಜಿಎ ಯೋಜನೆಯಡಿ ಕೂಲಿಕಾರರಿಗೆ ಹಣ ಪಾವತಿಸಲು ಸಕಾಲದಲ್ಲಿ ಅನುಮೋದನೆ ನೀಡದೆ, ಎಂಜಿಎನ್‌ಆರ್‌ಇಜಿಎ ಯೋಜನೆಯ ಅನುಷ್ಠಾನದಲ್ಲಿ ಪ್ರಗತಿ ಕುಂಠಿತವಾಗಲು ಜವಾಬ್ದಾರರಾಗಿರುವುದು, ನವೆಂಬರ್ 2013 ರಿಂದ ಮೇ 2014 ರವರೆಗೆ ಪ್ರತಿ ತಿಂಗಳು ಮಾಸಿಕ ದಿನಚರಿಗಳನ್ನು ಸಲ್ಲಿಸದೇ ಕರ್ತವ್ಯಲೋಪವೆಸಗಿರುವ ಆರೋಪಗಳಿಗೆ ಸಂಬಂಧಿಸಿದಂತೆ ಮೇಲೆ ಓದಲಾದ ಕ್ರಮ ಸಂಖ್ಯೆ (1) ರಲ್ಲಿ ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಾವಳಿ 1957 ರ ನಿಯಮ 11 ರಡಿಯಲ್ಲಿ ಕಾರಣ ಕೇಳುವ ನೋಟೀಸಿನೊಂದಿಗೆ ದೋಷಾರೋಪಣಾ ಪಟ್ಟಿಯನ್ನು (ಅನುಬಂಧ 1 ರಿಂದ 4) ಜಾರಿ ಮಾಡಲಾಗಿತ್ತು. ಸದರಿ ನೋಟೀಸಿಗೆ ಅಪಾದಿತ ಅಧಿಕಾರಿಯು ನಿಗದಿತ ಅವಧಿಯೊಳಗೆ ಲಿಖಿತ ರಕ್ಷಣಾ ಹೇಳಿಕೆಗಳನ್ನು ಸಲ್ಲಿಸದೇ ಇರುವುದರಿಂದ ಅವರ ಹೇಳಿಕೆ ಏನೂ ಇಲ್ಲವೆಂದು ಪರಗಣಿಸಿ, ನಿಯಮಾನುಸಾರ ಮುಂದಿನ ಕ್ರಮ ಜರುಗಿಸಲು ಉದ್ದೇಶಿಸಿ ಸದರಿ ಅಧಿಕಾರಿ ವಿರುದ್ಧದ ಆರೋಪಗಳ ಸತ್ಯಾಸತ್ಯತೆಯನ್ನು ಕಂಡು ಹಿಡಿಯಲು ಇಲಾಖಾ ವಿಚಾರಣೆಯನ್ನು ಜರುಗಿಸಲು ಸರ್ಕಾರ ನಿರ್ಧರಿಸಿ, ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 128 ವಿಸೇಬಿ 2014 ಬೆಂಗಳೂರು ದಿನಾಂಕ:13-03-2015**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ ಸರ್ಕಾರವು ಶ್ರೀ ಟಿ. ಸಿದ್ದಪ್ಪ, ಹಿಂದಿನ ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯತಿ, ಸಾಗರ, ಶಿವಮೊಗ್ಗ ಜಿಲ್ಲೆ ಇವರ ವಿರುದ್ಧ ಮಾಡಲಾದ ಆರೋಪಗಳ ಸತ್ಯಾಸತ್ಯತೆಯನ್ನು ತಿಳಿಯಲು ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಾವಳಿ 1957 ರ ನಿಯಮ 11 ರ ಪ್ರಕಾರ ಇಲಾಖಾ ವಿಚಾರಣೆ ನಡೆಸಲು ಸದರಿ ನಿಯಮಾವಳಿಗಳ ನಿಯಮ 11(2) ರ ಪ್ರಕಾರ ಶ್ರೀ ಎ. ಕೃಷ್ಣಪ್ಪ, ನಿವೃತ್ತ ಜಿಲ್ಲಾ ನ್ಯಾಯಾಧೀಶರು, ಬೆಂಗಳೂರು ಇವರನ್ನು ವಿಚಾರಣಾಧಿಕಾರಿಯನ್ನಾಗಿ ಹಾಗೂ ನಿಯಮ 11(5)(ಸಿ) ರ ಪ್ರಕಾರ ಸಹಾಯಕ ಕಾರ್ಯದರ್ಶಿ, ಜಿಲ್ಲಾ ಪಂಚಾಯತಿ, ಶಿವಮೊಗ್ಗ ಇವರನ್ನು ಶಿಸ್ತು ಪ್ರಾಧಿಕಾರದ ಪರವಾಗಿ ಮಂಡನಾಧಿಕಾರಿಯಾಗಿ ನೇಮಿಸಿದೆ.

ವಿಚಾರಣಾಧಿಕಾರಿಯವರು ಇಲಾಖಾ ವಿಚಾರಣೆಯನ್ನು ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಾವಳಿ 1957 ರ ನಿಯಮ 11 ರಲ್ಲಿ ನಿಗದಿ ಪಡಿಸಿರುವ ಕಾರ್ಯವಿಧಾನ ಪ್ರಕಾರ ವಿಚಾರಣೆ ಜರುಗಿಸಿ ವಿಚಾರಣಾ ವರದಿಯನ್ನು 3 ತಿಂಗಳೊಳಗಾಗಿ ಸರ್ಕಾರಕ್ಕೆ ಸಲ್ಲಿಸತಕ್ಕದ್ದು.

ವಿಚಾರಣಾಧಿಕಾರಿಗಳಿಗೆ ಸೂಕ್ತ ಸ್ಥಳಾವಕಾಶ, ಶೀಘ್ರಲಿಪಿಗಾರರ ಸೇವೆ ಹಾಗೂ ಅಗತ್ಯ ಸೌಲಭ್ಯಗಳನ್ನು ಒದಗಿಸಲು ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತಿ, ಬೆಂಗಳೂರು(ಗ್ರಾ) ಇವರು ಕ್ರಮ ಕೈಗೊಳ್ಳತಕ್ಕದ್ದು.

ವಿಚಾರಣಾಧಿಕಾರಿಗಳು ಇಲಾಖಾ ವಿಚಾರಣಾ ವರದಿಯನ್ನು ಸರ್ಕಾರಕ್ಕೆ ಸಲ್ಲಿಸಿದ ನಂತರ ಸರ್ಕಾರದ ಆದೇಶ ಸಂಖ್ಯೆ: ಸಿಆಸುಇ/6/ ಸೇಇವಿ/2010 ದಿನಾಂಕ: 28-04-2011 ರನ್ವಯ ವಾಹನ ಭತ್ಯೆಯೂ ಸೇರಿದಂತೆ ರೂ. 15,000/- ಗಳ ಸಂಭಾವನೆಯನ್ನು ಪಡೆಯಲು ಅರ್ಹರಿರುತ್ತಾರೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಸಿದ್ಧಮಲ್ಲಪ್ಪ) 13/2/15
ಸರ್ಕಾರದ ಅಧೀನ ಕಾರ್ಯದರ್ಶಿ (ಸೇ.ಬಿ&ಸಿ)(ಪ್ರ),
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.

ಗೆ:

1. ಮಹಾಲೇಖಪಾಲರು, ಕರ್ನಾಟಕ, ಬೆಂಗಳೂರು.
2. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತಿ, ಬೆಂಗಳೂರು(ಗ್ರಾ)/ಶಿವಮೊಗ್ಗ
3. ಶ್ರೀ ಎ. ಕೃಷ್ಣಪ್ಪ, ನಿವೃತ್ತ ಜಿಲ್ಲಾ ನ್ಯಾಯಾಧೀಶರು, ಮತ್ತು ವಿಚಾರಣಾಧಿಕಾರಿಗಳು, ಮನೆ ನಂ. 1242, 4ನೇ ಮುಖ್ಯ ರಸ್ತೆ, 8ನೇ ಕ್ರಾಸ್, ಚಂದ್ರಾಲೇಔಟ್, ಬೆಂಗಳೂರು-40.
4. ಸಹಾಯಕ ಕಾರ್ಯದರ್ಶಿ, ಜಿಲ್ಲಾ ಪಂಚಾಯತಿ, ಶಿವಮೊಗ್ಗ (ಮಂಡನಾಧಿಕಾರಿ).
5. ಆಪಾದಿತ ಅಧಿಕಾರಿ/ನೌಕರರುಗಳಿಗೆ(ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತಿ, ಶಿವಮೊಗ್ಗ ಇವರ ಮುಖಾಂತರ)

ಪ್ರತಿಯನ್ನು:-

1. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ/ಕಾರ್ಯದರ್ಶಿ(ಪಂ.ರಾಜ್)/ಅಪರ ಕಾರ್ಯದರ್ಶಿ (ಆಡಳಿತ), ಗ್ರಾ .ಅ. & ಪಂ.ರಾಜ್ ಇಲಾಖೆ, ಇವರ ಆಪ್ತ ಶಾಖೆಗೆ.
2. ವಿಶೇಷಾಧಿಕಾರಿ, ಗಣಕ ಕೋಶ, ಗ್ರಾ.ಅ.ಪಂ.ರಾಜ್ ಇಲಾಖೆ.
3. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿ.